ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿನ ಕೃಷಿ ಮತ್ತು ಕೃಷಿಕರ ಸಮಸ್ಯೆಗಳ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

349 (392) ಮಾನ್ಯ ಕೃಷಿ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ಕಾರಣದಿಂದ ಕುಂಠಿತಗೊಂಡಿರುವ ರಾಜ್ಯದ ಕೃಷಿ ಮತ್ತು ಕೃಷಿಕರ ಸಂಕಷ್ಟಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ರೈತರ ಕ್ಷೇಮಾಭಿವೃದ್ಧಿ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳ ಕೃಷಿ ಮಾರುಕಟ್ಟೆ ಸುಧಾರಣೆಗೆ ಸರ್ಕಾರ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದಾದ್ಯಂತ ಕೃಷಿಯಿಲ್ಲದೇ ಹಾಳುಬಿದ್ದ ವ್ಯವಸಾಯ ಭೂಮಿಗಳ ಪುನರಾಭಿವೃದ್ಧಿಗೆ ಸರ್ಕಾರ ಯಾವ ಯಾವ ವಿನೂತನ ಯೋಜನೆ ಹಮ್ಮಿಕೊಳ್ಳಲಿದೆ ; (ವಿವರ ನೀಡುವುದು)

(ಈ) ಕೋವಿಡ್ ಕಾರಣದಿಂದ ಪದವೀಧರ ಯುವಕರು ಮತ್ತೆ ಕೃಷಿಯತ್ತ ಮುಖ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಯುವಕರಿಗೆ ಸೂಕ್ತ ಮಾರ್ಗದರ್ಶನ ನೀಡಲು ಸರ್ಕಾರದ ಯಾವ ತರಬೇತಿ ಕಾರ್ಯಕ್ರಮ ರೂಪಿಸಲಿದೆ ?